ಬುಧವಾರ 19.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 103
Digital Varthe Kannada Daily
Volume 01 - Issue 103
Wednesday 19.11.2025
Price: 5/- Rs
2 Pages Bangalore


PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಕೊಟ್ಟ ಹಣ ವಾಪಸ್ ಕೇಳಿದ್ದಕ್ಕೆ 'ದೃಶ್ಯ' ಸಿನಿಮಾ ಸ್ಟೈಲ್‌ನಲ್ಲಿ ಎಂಜಿನಿಯರ್ ಮರ್ಡರ್







**ಆನೇಕಲ್** :ಕೊಟ್ಟ ಹಣ ವಾಪಸ್ ಕೇಳಿದ್ದಕ್ಕೆ 'ದೃಶ್ಯ' ಸಿನಿಮಾ ಸ್ಟೈಲ್‌ನಲ್ಲಿ ದುರುಳರು ಇಂಜಿನಿಯರ್‌ನನ್ನು ಹತ್ಯೆಗೈದಿರುವ ಪ್ರಕರಣವನ್ನು ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲೂಕಿನ ಅತ್ತಿಬೆಲೆ ಪೊಲೀಸರು ಭೇದಿಸಿದ್ದಾರೆ. ಇಂಜಿನಿಯರ್ ನಾಪತ್ತೆ ಪ್ರಕರಣ ಬೆನ್ನತ್ತಿದ ಪೊಲೀಸರು, ಕೊಲೆಮಾಡಿ ಬಳಿಕ ಮೃತದೇಹವನ್ನ ಆರೋಪಿ ಮನೆಯಲ್ಲಿ ಹೂತು ಹಾಕಿದ್ದ ಎಂಬುದನ್ನು ಬಹಿರಂಗಪಡಿಸಿದ್ದಾರೆ. ಆ ಮೂಲಕ ನಾಪತ್ತೆ ಕೇಸ್ ಕೊಲೆ ಪ್ರಕರಣವಾಗಿ ಮಾರ್ಪಟ್ಟಿದೆ.

ಆಂಧ್ರಪ್ರದೇಶದ ಕುಪ್ಪಂ ಮೂಲದ ಶ್ರೀನಾಥ್(30) ಬರ್ಬರ ಕೊಲೆಯಾದ ವ್ಯಕ್ತಿಯಾಗಿದ್ದು, ಆರೋಪಿ ಪ್ರಭಾಕರ್ ಮತ್ತು ಆತನ ಸ್ನೇಹಿತನನ್ನು ಪೊಲೀಸರು ಬಂಧಿಸಿದ್ದಾರೆ. ಅತ್ತಿಬೆಲೆಯ ನೆರಳೂರಿನಲ್ಲಿ ಪತ್ನಿ, ಮಗುವಿನೊಂದಿಗೆ ವಾಸವಿದ್ದ ಎಂಜಿನಿಯರ್ ಶ್ರೀನಾಥ್‌ಗೆ ಕೈತುಂಬ ಸಂಬಳ ಬರುತ್ತಿತ್ತು. ಹಣ ಡಬಲ್ ಮಾಡಿಕೊಡುವುದಾಗಿ ಹೇಳಿದ್ದ ಹಂತಕ ಪ್ರಭಾಕರ್, ಸೋದರ ಸಂಬಂಧಿ ಶ್ರೀನಾಥ್ ಬಳಿ 40 ಲಕ್ಷ ರೂ. ಹಣ ಪಡೆದಿದ್ದ. ಇತ್ತೀಚೆಗೆ ಆ ಹಣ ವಾಪಸ್ ಕೊಡುವಂತೆ ಪ್ರಭಾಕರ್‌ಗೆ ಶ್ರೀನಾಥ್ ಕೇಳಿದ್ದ ಕಾರಣ, ಅವರ ಹತ್ಯೆಗೆ ಮಾಸ್ಟರ್ ಪ್ಲ್ಯಾನ್ ರೂಪಿಸಲಾಗಿತ್ತು. ಹಣ ಕೊಡ್ತೀನಿ ಬಾ ಅಂತಾ ಆಂಧ್ರದ ಕುಪ್ಪಂಗೆ ಶ್ರೀನಾಥ್‌ರನ್ನ ಆರೋಪಿ ಕರೆಸಿಕೊಂಡಿದ್ದ. ಕುಪ್ಪಂನಲ್ಲಿ ಶ್ರೀನಾಥ್ ಮನೆಯೊಳಗೆ ಬರುತ್ತಿದ್ದಂತೆ ಅವರ ತಲೆಗೆ ಸುತ್ತಿಗೆಯಿಂದ ಹೊಡೆದು ಪ್ರಭಾಕರ್ ಮತ್ತು ಆತನ ಸ್ನೇಹಿತ ಜಗದೀಶ್ ಸೇರಿ ಹತ್ಯೆಗೈದಿದ್ದರು. ಕೊಲೆ ಬಳಿಕ ಅದೇ ಮನೆಯಲ್ಲೇ ಗುಂಡಿ ತೆಗೆದು ಹೂತಾಕಿದ್ದರು. ಕುಪ್ಪಂಗೆ ಹೋಗುವ ವಿಷಯವನ್ನು ಶ್ರೀನಾಥ್ ಪತ್ನಿಗೆ ತಿಳಿಸಿಹೋಗಿದ್ದು,

ಈ ಬಗ್ಗೆ ಅವರು ಪ್ರಭಾಕರ್‌ನನ್ನು ಪ್ರಶ್ನಿಸಿದರೂ ಏನೂ ಗೊತ್ತಿಲ್ಲದಂತೆ ಆತ ನಾಟಕವಾಡಿದ್ದ. 2 ದಿನವಾದ್ರೂ ಪತಿ ಮನೆಗೆ ಬಾರದೆ ಇದ್ದಾಗ ಅತ್ತಿಬೆಲೆ ಠಾಣೆಗೆ ಶ್ರೀನಾಥ್ ಪತ್ನಿ ದೂರು ನೀಡಿದ್ದಾರೆ. ಪ್ರಕರಣ ಸಂಬಂಧ ಪ್ರಭಾಕರ್ ಮತ್ತು ಜಗದೀಶ್‌ನನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ನಡೆಸಿದಾಗ ಕೊಲೆ ರಹಸ್ಯ ಹೊರಗೆ ಬಂದಿದೆ. ಶ್ರೀನಾಥ್‌ರನ್ನು ಕೊಂದು ಕುಪ್ಪಂನ ಮನೆಯಲ್ಲಿ ಹೂತು ಹಾಕಿರೋದಾಗಿ ಹಂತಕರು ಬಾಯ್ಬಿಟ್ಟಿದ್ದಾರೆ. ಕುಪ್ಪಂ ತಹಶೀಲ್ದಾರ್ ನೇತೃತ್ವದಲ್ಲಿ ಶ್ರೀನಾಥ್ ಮೃತದೇಹವನ್ನು ಪೊಲೀಸರು ಹೊರತೆಗೆದಿದ್ದಾರೆ.

ಆರೋಪಿಗಳ ಕ್ರೈಂ ಹಿಸ್ಟರಿ ಭಯಾನಕ ಇನ್ನು ಶ್ರೀನಾಥ್ ಅವರನ್ನು ಕೊಲೆ ಮಾಡಿರುವ ಆರೋಪಿಗಳ ಕ್ರೈಂ ಹಿಸ್ಟರಿ ಭಯಾನಕವಾಗಿದ್ದು, ಈ ಹಿಂದೆ ತನ್ನ ಪತ್ನಿಯನ್ನೇ ಪ್ರಭಾಕರ್ ಕೊಲೆ ಮಾಡಿದ್ದ. ಹಣದ ವಿಚಾರವಾಗಿ ನಡೆದ ಕೊಲೆ ಪ್ರಕರಣ ಸಂಬಂಧ ಜೈಲಿಗೆ ಹೋಗಿದ್ದ. ಎ2 ಜಗದೀಶ್ ಕೂಡ ತನ್ನ ಪ್ರೇಯಸಿಯನ್ನ ಮರ್ಡರ್ ಮಾಡಿದ್ದ. ಒಮ್ಮೆ ಜೈಲಿಗೆ ಹೋಗಿ ಬಂದರೂ ಬುದ್ಧಿ ಕಲಿಯದ ಇವರು ಮತ್ತೆ ಅಂತಹುದೇ ಕೆಲಸ ಮಾಡಿದ್ದಾರೆ. ಜೈಲಿನಿಂದ ಹೊರಬಂದ ಬಳಿಕ ಶ್ರೀನಾಥ್ ಬಳಿ ಪ್ರಭಾಕರ್ ಹಣ ಪಡೆದಿದ್ದ ಎನ್ನಲಾಗಿದ್ದು, ದೊಡ್ಡಪ್ಪನ ಮಗ ಅಂತ ನಂಬಿ ಪ್ರಭಾಕರ್‌ಗೆ ಶ್ರೀನಾಥ್ ಹಣ ಕೊಟ್ಟಿದ್ದರು. ಹಣ ವಾಪಸ್ ಕೇಳಿದಾಗ ದುಡ್ಡಿನ ವಿಚಾರವಾಗಿ ಫೋನ್‌ನಲ್ಲಿ ಮಾತಾನಾಡಬೇಡ, ಐಟಿ ಪ್ರಾಬ್ಲಮ್ ಆಗುತ್ತೆ. ಬದಲಾಗಿ ವಾಟ್ಸ್ಯಾಪ್ ಸ್ಟೇಟಸ್ ಹಾಕುವ ಮೂಲಕ ಮಾತಾಡಿಕೊಳ್ಳೋಣ ಎಂದು ಪ್ರಭಾಕರ್ ಹೇಳಿದ್ದ. ಅಕ್ಟೋಬರ್ 27ರಂದು ಹಣ ವಾಪಸ್ ಕೊಡೋದಾಗಿ ತಿಳಿಸಿದ್ದ.

ಇವಿಷ್ಟೇ ಅಲ್ಲದೆ, ಕುಪ್ಪಂಗೆ ಬರುವಾಗ ಮೊಬೈಲ್ ಮನೆಯಲ್ಲಿಯೇ ಬಿಟ್ಟು ಬಾ. ಇಲ್ಲದಿದ್ದರೆ ಸಮಸ್ಯೆ ಆಗುತ್ತೆ ಎಂದೂ ಶ್ರೀನಾಥ್ ಅವರಿಗೆ ಪ್ರಭಾಕರ್ ತಿಳಿಸಿದ್ದ. ಹೀಗಾಗಿ ಮೊಬೈಲ್ ಮನೆಯಲ್ಲೇ ಬಿಟ್ಟು ಶ್ರೀನಾಥ್ ತೆರಳಿದ್ದರು. ಪೊಲೀಸರ ವಿಚಾರಣೆ ಸಂದರ್ಭವೂ ಶ್ರೀನಾಥ್ ತನಗೆ ಸಿಗಲೇ ಇಲ್ಲ. ಬೇಕಿದ್ರೆ ಮೊಬೈಲ್ ಚೆಕ್ ಮಾಡಿ ಎಂದು ಪ್ರಭಾಕರ್ ಹೇಳಿದ್ದ. ಪ್ರಭಾಕರ್‌ನ ಒಂದು ತಿಂಗಳ ಕಾಲ್ ಮಾಹಿತಿ ಪಡೆದರೂ ಘಟನೆ ಬಗ್ಗೆ ಯಾವುದೇ ಸುಳಿವು ಸಿಗದ ಕಾರಣ ಪೊಲೀಸರು 2 ತಿಂಗಳ ಮಾಹಿತಿ ಪರಿಶೀಲಿಸಿದ್ದಾರೆ. ಈ ವೇಳೆ ಜಗದೀಶ್ ಜೊತೆಗಿನ ಲಿಂಕ್ ಪತ್ತೆಯಾಗಿದೆ.

## ಹೈವೆಯಲ್ಲಿ ಅಡ್ಡಾದಿಡ್ಡಿ ಸ್ಕೂಟಿ ಚಾಲನೆ - ಪ್ರಶ್ನಿಸಿದವರಿಗೆ ಚಾಕು ಇರಿದ ಲೇಡಿ ಟೆಕ್ಕಿ



**ಚಿಕ್ಕಬಳ್ಳಾಪುರ:** ಹೈವೇಯಲ್ಲಿ ಮಹಿಳಾ ಟೆಕ್ಕಿಯೊಬ್ಬಳು ಅಡ್ಡಾದಿಡ್ಡಿ ಸ್ಕೂಟಿ ಚಾಲನೆ ಮಾಡುತ್ತಿದ್ದಿದ್ದನ್ನು ಪ್ರಶ್ನಿಸಿದ್ದಕ್ಕೆ ಬೈಕ್ ಸವಾರರಿಗೆ ಚಾಕು ಇರಿದ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆದಿದೆ. ಬೈಕ್ ಸವಾರರಿಗೆ ಚಾಕು ಇರಿದ ಮಹಿಳಾ ಟೆಕ್ಕಿಯನ್ನು ತಮಿಳುನಾಡು ಮೂಲದ ರವಿಕಾ ಎಂದು ಗುರುತಿಸಲಾಗಿದೆ. ತನ್ನ ತಮಿಳುನಾಡು ನೊಂದಣಿಯ ಸ್ಕೂಟಿ ಏರಿ ಚಿಕ್ಕಬಳ್ಳಾಪುರದ ಬಾಗೇಪಲ್ಲಿ ಕಡೆಗೆ ಬಂದು ವಾಪಾಸ್ ಬೆಂಗಳೂರಿನತ್ತ ತೆರಳುತ್ತಿದ್ದಳು.

ಈ ವೇಳೆ ಬೆಂಗಳೂರು ಹೈದರಾಬಾದ್ ಹೈವೆಯಲ್ಲಿ ಅಡ್ಡಾ ದಿಡ್ಡಿಯಾಗಿ ಸ್ಕೂಟಿ ಒಡಿಸ್ತಾ ಹಿಂದೆ ಬರ್ತಿದ್ದ ಸವಾರರಿಗೆ ಇರುಸು ಮುರುಸು ಉಂಟು ಮಾಡಿದ್ದಳು. ಹೀಗಾಗಿ ವಾಪಸಂದ್ರ ಸೇತುವೆ ಕೆಳಗಡೆ ಸ್ಕೂಟಿ ನಿಲ್ಲಿಸಿ ನಿಂತಿದ್ದ ಈಕೆಯನ್ನ ಹಿಂಬದಿ ಬರುತ್ತಿದ್ದ ಬೈಕ್ ಸವಾರರಾದ ನಿಖಿಲ್ ಹಾಗೂ ನರಸಿಂಹಮೂರ್ತಿ ಪ್ರಶ್ನೆ ಮಾಡಿದ್ದಾರೆ. ಯಾಕಮ್ಮ ಗಾಡಿ ಅಡ್ಡಾದಿಡ್ಡಿ ಒಡಿಸ್ತಿದ್ದೀಯಾ? ಅಂದಿದ್ದೇ ತಡ ಆಕೆ ಬಳಿ ಇದ್ದ ಫೋಲ್ಡೆಡ್ ಚಾಕುವಿನಿಂದ ಅಟ್ಯಾಕ್ ಮಾಡಿದ್ದಾಳೆ. ಇದ್ರಿಂದ ಬೈಕ್ ಸವಾರ ನಿಖಿಲ್ ಕೈಗೆ ಗಂಭೀರ ಗಾಯವಾಗಿ ತೀವ್ರ ರಕ್ತಸ್ರಾವವಾಗಿದೆ,

ಹಿಂಬದಿ ಸವಾರ ನರಸಿಂಹಮೂರ್ತಿಗೆ ಸಣ್ಣಪುಟ್ಟ ಗಾಯವಾಗಿದೆ. ಆಕೆ ಚಾಕುವಿನಿಂದ ಅಟ್ಯಾಕ್ ಮಾಡ್ತಿದ್ದಂತೆ ಯುವಕ ನಿಖಿಲ್ ಸಹ ತಿರುಗಿ ಆಕೆ ಮೇಲೆ ಹಲ್ಲೆ ಮಾಡಿದ್ದಾನೆ. ಈ ಎಲ್ಲಾ ದೃಶ್ಯಗಳು ಸ್ಥಳೀಯ ಹೋಟೆಲ್‌ವೊಂದರ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಘಟನೆ ಆಗ್ತಿದ್ದಂತೆ ಇತರೆ ವಾಹನ ಸವಾರರು, ಸ್ಥಳೀಯರು ಜಮಾಯಿಸಿ ಯುವತಿಯನ್ನ ರೆಡ್ ಹ್ಯಾಂಡಾಗಿ ಹಿಡಿದುಕೊಂಡಿದ್ದಾರೆ. ಪೊಲೀಸರನ್ನ ಕರೆಸಿ ಆಕೆಯನ್ನ ಒಪ್ಪಿಸಿದ್ದಾರೆ.

ಚಿಕ್ಕಬಳ್ಳಾಪುರ ಗ್ರಾಮಾಂತರ ಪೊಲೀಸರು ಯುವಕ ನಿಖಿಲ್ ಹೇಳಿಕೆ ಆಧರಿಸಿ ಪ್ರಕರಣ ದಾಖಲಿಸಿಕೊಂಡು ರವಿಕಾಳನ್ನ ವಿಚಾರಣೆ ನಡೆಸುತ್ತಿದ್ದಾರೆ. ಯುವಕರು ನನ್ನನ್ನ ಫಾಲೋ ಮಾಡಿ ಅನುಚಿತವಾಗಿ ವರ್ತನೆ ಮಾಡಿದ್ರು, ಅದಕ್ಕೆ ನಾನು ಚಾಕುವಿನಿಂದ ಅಟ್ಯಾಕ್ ಮಾಡಿದೆ ಎಂದು ಆಕೆ ಆರೋಪಿಸಿದ್ದಾಳೆ. ಆಕೆ ಪೊಲೀಸ್ ಠಾಣೆಯಲ್ಲೂ ಪೊಲೀಸರಿಗೆ ಸಹಕರಿಸದೆ ಚಿತ್ರ ವಿಚಿತ್ರವಾಗಿ ವರ್ತಿಸುತ್ತಿದ್ದಾಳೆ.

## ಗ್ಯಾಸ್ ಟ್ಯಾಂಕರ್ ಪಲ್ಟಿ ಅಂಕೋಲಾ-ಯಲ್ಲಾಪುರ ಹೆದ್ದಾರಿ ಸಂಚಾರ ಬಂದ್



**ಕಾರವಾರ:** ಚಾಲಕನ ನಿಯಂತ್ರಣ ತಪ್ಪಿ ಗ್ಯಾಸ್ ಟ್ಯಾಂಕರ್ ಪಲ್ಟಿಯಾದ ಪರಿಣಾಮ ಅನಿಲ ಸೋರಿಕೆಯಾದ ಘಟನೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲ) ತಾಲೂಕಿನ ರಾಷ್ಟ್ರೀಯ ಹೆದ್ದಾರಿ-52ರ ಕಂಚಿನ ಬಾಗಿಲು ಬಳಿ ನಡೆದಿದೆ. ಅಪಘಾತದಲ್ಲಿ ಚಾಲಕನಿಗೆ ಗಂಭೀರ ಗಾಯವಾಗಿದೆ. ಗುಜರಾತ್‌ನಿಂದ ಉಡುಪಿ ಕಡೆಗೆ ಹೋಗುತಿದ್ದ ಗ್ಯಾಸ್ ಟ್ಯಾಂಕರ್ ಚಾಲಕನ ನಿಯಂತ್ರಣ ತಪ್ಪಿ ಪಲ್ಟಿಯಾಗಿ ಟ್ಯಾಂಕರ್ ನಲ್ಲಿ ಇದ್ದ ಗ್ಯಾಸ್ ಲೀಕ್ ಆಗಿದೆ ಗಂಭೀರ ಗಾಯಗೊಂಡ ಗ್ಯಾಸ್ ಟ್ಯಾಂಕರ್ ಚಾಲಕ ಅರುಣ್ ಶೇಖ್ (57) ನನ್ನು ಉಡುಪಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಲ್ಲದೇ ಗ್ಯಾಸ್ ಟ್ಯಾಂಕರ್ ನಲ್ಲಿ ಎಥೆನಾಲ್ ಸೋರಿಕೆಯಾದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ 52ರ ಸಂಚಾರ ಬಂದ್ ಮಾಡಿದ್ದು, ಅಂಕೋಲ ದಿಂದ ಮಾದನಗೇರಿ ಹೆದ್ದಾರಿ ಮೂಲಕ ಮಾರ್ಗ ಬದಲು ಮಾಡಲಾಗಿದೆ.

ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಹಾಗೂ NDR ತಂಡ ರವಾನೆ ಮಾಡಲಾಗಿದ್ದು, ಗ್ಯಾಸ್ ಸೋರಿಕೆಯನ್ನ ತಡೆಯಲು ಕ್ರಮ ಕೈಗೊಳ್ಳಲಾಗಿದೆ. ಘಟನೆ ಸಂಭಂಧ ಅಂಕೋಲ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಸಮಾನತೆ ಸಹೋದರತ್ವ ಮತ್ತು ಸಕಾರಾತ್ಮಕತೆ ವಿಷನ್ ಇಂಡಿಯಾದ ದೃಷ್ಟಿಕೋನ.



**ಬೆಂಗಳೂರು:**

ದೇಶಕ್ಕೆ ಬಿಜೆಪಿ ಸರ್ಕಾರ ಬಿಕ್ಕಟ್ಟನ್ನು ಸೃಷ್ಟಿಸಿ ದೇಶದ ಜನರ ಮೇಲೆ ಏಕವರ್ಣದ ಸಿದ್ಧಾಂತವನ್ನು ಹೇರಲಾಗುತ್ತಿದೆ ಎಂದು ಮಾಜಿ ಮುಖ್ಯ ಮಂತ್ರಿ ಅಖಿಲೇಶ್ ಯಾದವ್ ಅವರು ಹೇಳಿದರು.

ಬೆಂಗಳೂರಿನಲ್ಲಿ ನಡೆದ ವಿಷನ್ ಇಂಡಿಯಾ ಪ್ಲಾನ್, ಡೆವಲಪ್, ಅಸೆಂಟ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾಜಿ ಮುಖ್ಯ ಮಂತ್ರಿ ಅಖಿಲೇಶ್ ಯಾದವ್ ರವರು ಸುದ್ದಿಗೋಷ್ಠಿ ಯಲ್ಲಿ ಮಾತನಾಡಿ ಮೊಟ್ಟ ಮೊದಲ ಬಾರಿಗೆ ಬೆಂಗಳೂರು ನಲ್ಲಿ ಆಯೋಜಿಸದ ವಿಷನ್ ಇಂಡಿಯಾ ಶೃಂಗ ಸಭೆಯು ಭಾರತದ ಗುರುತು ಯಾವಾಗಲೂ ವೈವಿಧ್ಯತೆಯಾಗಿದೆ ನಮ್ಮ ವಿಷನ್ ಇಂಡಿಯಾದ ಗುರಿ ದೇಶದಲ್ಲಿ ಸಮಾನತೆ ಏಕತೆಯನ್ನು ತರುವುದು, ನಮ್ಮ ದೇಶವನ್ನು ಯಾವಾಗಲು ಸಹೋದರತ್ವ ರಾಷ್ಟವಾಗಿ ಗುರುತಿಸುವುದು ಮತ್ತು ವೈವಿಧ್ಯತೆಯಲ್ಲಿ ಏಕತೆಯ ಗುರುತಿನೊಂದಿಗೆ ಮುಂದುವರಿಸುವುದು. ಪ್ರತಿಯೊಬ್ಬರೂ ರಾಷ್ಟ್ರದಲ್ಲಿ ಸಮಾನತೆ ಸಹಕಾರ ಪ್ರಗತಿಪರರು ಮತ್ತು ಸಕಾರಾತ್ಮಕರು ಎಂದು ಖಚಿತಪಡಿಸಿಕೊಳ್ಳುವುದು ನಮ್ಮ ಪ್ರಯತ್ನವಾಗಿದೆ

ದೇಶದ ಪ್ರತಿಯೊಬ್ಬರಿಗೂ ಸಮಾನ ಅವಕಾಶಗಳನ್ನು ಒದಗಿಸುವುದು. ನಮ್ಮೊಂದಿಗೆ ಕೊನೆಯ ವ್ಯಕ್ತಿಯನ್ನು ಕರೆದೊಯ್ಯುವುದು. ಹಿಂದುಳಿದಿರುವ ಜನರನ್ನು ಬಲಿಪಶುಗಳ ಕಷ್ಟಗಳನ್ನು ಪರಿಹರಿಸುವುದು. ಎಲ್ಲರನ್ನೂ ತಮ್ಮ ಜೀವನವನ್ನು ಮುನ್ನಡೆಸಲು, ನಾವು ಒಳಗೊಳ್ಳುವಿಕೆ ಮತ್ತು ಏಕೀಕರಣದ ಪ್ರತಿಯಾಗಿದೆ "ಯುವಜನರು ಪ್ರತಿಯೊಂದು ಸಂದರ್ಭದಲ್ಲಿ ಎದುರಿಸುವ ಕಷ್ಟ ಮತ್ತು ಸಮಸ್ಯೆಗೆ ಪರಿಹಾರಗಳನ್ನು ಕಂಡುಕೊಳ್ಳಬೇಕು ಎಂದು ನಾನು ನಂಬುತ್ತೇನೆ" ದೇಶದಲ್ಲಿ ಇಂದಿನ ಯುವಕರು ಸಕಾರಾತ್ಮಕವಾಗಿ ಯೋಚಿಸುತ್ತಾರೆ ಅದಕ್ಕಾಗಿ ಯುವಜನತೆಗೆ ರಾಜಕೀಯ ತತ್ವಶಾಸ್ತ್ರವನ್ನು ತಂದಿದ್ದೇವೆ ಈ ನಿಟ್ಟಿನಲ್ಲಿ ಯುವಜನ ಸಭಾವನ್ನು ಮತ್ತಷ್ಟು ಪ್ರಬಲ ಗೊಳ್ಳುತ್ತದೆ ಎಂದು ಹೇಳಿದರು.

ಸಮಾಜವಾದಿ ಪಕ್ಷದ ಲೋಕ ಸಭಾ ಸದಸ್ಯ ರಾಜೀವ್ ರಾಯ್ ಮಾತನಾಡಿ ಈ ವಿಷನ್ ಇಂಡಿಯಾ ಕಾರ್ಯಕ್ರಮಕ್ಕೆ ಬೆಂಗಳೂರನ್ನು ಏಕೆ ಆಯ್ಕೆ ಮಾಡಲಾಗಿದೆ ಎಂದರೇ ಬೆಂಗಳೂರು ಸ್ಟಾರ್ಟ್‌ಅಪ್ ಇಂಡಿಯಾದ ಕೇಂದ್ರವಾಗಿದೆ. 2016 ರಲ್ಲಿ, ಉತ್ತರ ಪ್ರದೇಶದ ಸಮಾಜವಾದಿ ಸರ್ಕಾರವು ಮೊದಲು ಸ್ಟಾರ್ಟ್‌ಅಪ್ ನೀತಿಯನ್ನು ರೂಪಿಸಿತು, ಅದಕ್ಕಾಗಿ ಬಜೆಟ್ ನಿಬಂಧನೆಗಳನ್ನು ಮಾಡಿತು. ಆಗಿನ ಮುಖ್ಯ ಕಾರ್ಯದರ್ಶಿ ಅಲೋಕ್ ರಂಜನ್ ಅದನ್ನು ಮುಂದಕ್ಕೆ ಬಂದಿದ್ದರು ಉತ್ತರ ಪ್ರದೇಶದ ನಗರಗಳಲ್ಲಿ ಬೆಂಗಳೂರಿನಂತೆಯೇ ಪರಿಸರ ವ್ಯವಸ್ಥೆ ಮತ್ತು ಸೌಲಭ್ಯಗಳನ್ನು ಒದಗಿಸುವುದು ವಿಷನ್ ಇಂಡಿಯಾದ ಗುರಿಯಾಗಿದೆ ಎಂದು ಅವರು ಹೇಳಿದರು.

ದೇಶದಲ್ಲಿ ರೈತರ ಕೃಷಿ ಮತ್ತು ಯುವ ಜನರ ನವೋದ್ಯಮ ಅಭಿವೃದ್ಧಿಗೆ ಉತ್ತರ ಪ್ರದೇಶವು ಗಮನಾರ್ಹ ಸಾಮರ್ಥ್ಯವನ್ನು ಪಡೆದುಕೊಂಡಿರುವುದು ಸಂತಸ ತಂದಿದೆ ಬೆಂಗಳೂರು ಸೇರಿದಂತೆ ರಾಜ್ಯದ ಯುವ ಜನಸಭಾ ನಾಯಕ ಮಾಜಿ ಮುಖ್ಯ ಮಂತ್ರಿ ಅಖಿಲೇಶ್ ಯಾದವ್ ಜೀ ರವರ ಕನಸಿನ ವಿಷನ್ ಇಂಡಿಯಾ ಪ್ಲಾನ್, ಡೆವಲಪ್, ಅಸೆಂಟ್ ನಂತಹ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಬೇಕಾಗಿದೆ.

## ಕುಡಿಯಬೇಡ ಅಂದಿದ್ದೇ ತಪ್ಪಾಯ್ತು ಹೆಂಡತಿ ಜೀವವನ್ನೇ ಬಲಿ ಪಡೆದ ಪಾಪಿ ಪತಿ





**ಚಿಕ್ಕಬಳ್ಳಾಪುರ ಬೆಂಗಳೂರು:**
ಕುಡಿದು ಬಂದಿದ್ದನ್ನು ಪ್ರಶ್ನಿಸಿದ್ದಕ್ಕೆ ಕುತ್ತಿಗೆ ಬಿಗಿದು ಪಾಪಿ ಪತಿಯೇ ಪತ್ನಿಯನ್ನು ಕೊಲೆಗೈದಿರುವ ಆಘಾತಕಾರಿ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲೂಕಿನ ಹುದುಗೂರು ಗ್ರಾಮದಲ್ಲಿ ನಡೆದಿದೆ. ಪಾವನಿ(30) ಮೃತ ದುರ್ದೈವಿಯಾಗಿದ್ದು, ಕೊಲೆ ಮಾಡಿದ ಪತಿ ರಾಘವೇಂದ್ರನನ್ನು ಪೊಲೀಸರು ಬಂಧಿಸಿದ್ದಾರೆ.

**ಗಂಡು ಮಗು ಅನಾಥ**

ಐದು ವರ್ಷಗಳ ಹಿಂದೆ ಪಾವನಿ ಹಾಗೂ ರಾಘವೇಂದ್ರ ಮದುವೆಯಾಗಿದ್ದರು. ಮೊನ್ನೆ ರಾಘವೇಂದ್ರ ಊರಿಗೆ ಬಂದಿದ್ರೂ ಮನೆಗೆ ಬಂದಿರಲಿಲ್ಲ. ಊರಿಗೆ ಬಂದ್ರೂ ಯಾಕೆ ಮನೆಗೆ ಬಂದಿಲ್ಲ ಎಂದು ಪಾವನಿ ಪ್ರಶ್ನಿಸಿದ್ದು, ಕುಡ್ಕೊಂಡು ಎಲ್ಲೋ ಬಿದ್ದಿರ್ತಿಯಾ ಮನೆಗೆ ಬರಲು ಆಗಲ್ವಾ ಎಂದಿದ್ದಾಳೆ. ಈ ವೇಳೆ ಕೆರಳಿದ್ದ ರಾಘವೇಂದ್ರ ಪತ್ನಿ ಜೊತೆ ಗಲಾಟೆ ಶುರುಮಾಡಿದ್ದಾನೆ. ಗಲಾಟೆ ವಿಕೋಪಕ್ಕೆ ಹೋಗಿದ್ದು, ಕುತ್ತಿಗೆಗೆ ವೇಲ್ ಬಿಗಿದು ಪತ್ನಿ ಪಾವನಿಯ ಕೊಲೆ ಮಾಡಿದ್ದಾನೆ. ಅತ್ತ ತಾಯಿ ಮೃತಪಟ್ಟಿದ್ದರೆ ಇತ್ತ ತಂದೆ ಜೈಲು ಸೇರಿರುವ ಕಾರಣ 4 ವರ್ಷದ ಗಂಡು ಮಗು ಅನಾಥವಾಗಿದೆ. ನೇಣು ಬಿಗಿದ ಸ್ಥಿತಿಯಲ್ಲಿ 28 ವರ್ಷದ ಗೃಹಿಣಿಯ ಮೃತ ದೇಹ ಪತ್ತೆಯಾಗಿರುವ ಘಟನ

ಬೆಂಗಳೂರಿನ ರಾಜಗೋಪಾಲನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ಮಹಿಳೆಯನ್ನು ಎಡ್ವಿನ್ ಎಂದು ಗುರುತಿಸಲಾಗಿದ್ದು, ಪತಿಯೇ ಪತ್ನಿಯನ್ನ ಹತ್ಯೆಗೈದಿರುವ ಆರೋಪ ಕೇಳಿಬಂದಿದೆ. ಕಳೆದ ಏಳು ವರ್ಷಗಳ ಹಿಂದೆ ಮಗಳ ಮದುವೆ ಆಗಿದ್ದು, ಹಣದ ವಿಚಾರಕ್ಕೆ ಜಗಳವಾಗಿ ಆಕೆಯ ಪತಿಯೇ ಎಡ್ವಿನ್ ಅವರನ್ನು ಕೊಂದಿರೋದಾಗಿ ಪೋಷಕರು ಆರೋಪಿಸಿದ್ದಾರೆ. ಇದಕ್ಕೆ ಪೂರಕವೆಂಬಂತೆ ಎಡ್ವಿನ್ ದೇಹದ ಮೇಲೆ ಗಾಯದ ಗುರುತುಗಳು ಪತ್ತೆಯಾಗಿದ್ದು, ಕೈ ಬಳೆಗಳು ಸಂಪೂರ್ಣ ಪುಡಿ ಪುಡಿಯಾಗಿವೆ. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ರವಾನಿಸಲಾಗಿದ್ದು, ಪ್ರಕರಣ ಸಂಬಂಧ ರಾಜಗೋಪಾಲ ನಗರ ಪೊಲೀಸರಿಂದ ತನಿಖೆ ಮುಂದುವರಿದಿದೆ.

## ಪತಿ, ಅತ್ತೆಯಿಂದ ಕಿರುಕುಳ ಆರೋಪ - ಮಗುವಿನೊಂದಿಗೆ ನದಿಗೆ ಹಾರಿ ಗೃಹಿಣಿ ಆತ್ಮಹತ್ಯೆ



**ಹಾಸನ:** ಪತಿ ಹಾಗೂ ಅತ್ತೆಯಿಂದ ಕಿರುಕುಳಕ್ಕೆ ) ಮನನೊಂದು ಗೃಹಿಣಿಯೊಬ್ಬರು ಮಗುವಿನೊಂದಿಗೆ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹಾಸನ ಜಿಲ್ಲೆ ಅರಕಲಗೂಡು ತಾಲೂಕಿನ ರಾಮನಾಥಪುರ ಬಳಿ ನಡೆದಿದೆ.

ಮಹಾದೇವಿ (29) ಆತ್ಮಹತ್ಯೆಗೆ ಶರಣಾದ ಮಹಿಳೆ. ಮಹಾದೇವಿ ಮೂರು ವರ್ಷಗಳ ಹಿಂದೆ ಅರಕಲಗೂಡು ತಾಲೂಕಿನ ಸೀಬಿಹಳ್ಳಿ ಗ್ರಾಮದ ಕುಮಾರ್ ಜೊತೆ ಎರಡನೇ ವಿವಾಹವಾಗಿದ್ದರು. ಮೊದಲ ಪತಿಯಿಂದ ವಿಚ್ಛೇದನ ಪಡೆದಿದ್ದ ಸಾಲಿಗ್ರಾಮ ತಾಲೂಕಿನ ಕರ್ಪೂರವಳ್ಳಿ ಗ್ರಾಮದ ಮಹಾದೇವಿ ಎರಡನೇ ಮದುವೆ ಸಂದರ್ಭ ಕುಟುಂಬಸ್ಥರು ವರದಕ್ಷಿಣೆ ರೂಪದಲ್ಲಿ 100 ಗ್ರಾಂ ಚಿನ್ನ ನೀಡಿದ್ದರು. ಆದರೆ ಇತ್ತೀಚಿಗೆ ಪತ್ನಿ ಮೇಲೆ ಅನುಮಾನ ಅನೀಡುತ್ತಿದ್ದ. ಕುಮಾರ್ ಕಿರುಕುಳ ತಾಳಲಾರದೆ ಮಹಾದೇವಿ ಕಳೆದ ಹದಿನೈದು ದಿನಗಳ ಹಿಂದೆ ತವರು ಮನೆ ಸೇರಿದ್ದರು. ಆದರೂ ಸುಮ್ಮನಾಗದ ಪತಿ ಕುಮಾರ್ ಪತ್ನಿಗೆ ಅಶ್ಲೀಲ ಮೆಸೇಜ್ ಮಾಡಿ ಮಾನಸಿಕ ಕಿರುಕುಳ ನೀಡುತ್ತಿದ್ದ. ಗುರುವಾರ ಹಾಸನಕ್ಕೆ ಬಂದಿದ್ದ ಮಹಾದೇವಿಗೆ ಬಸ್ ನಿಲ್ದಾಣದಲ್ಲೇ ಕುಮಾರ್ ನಿಂದಿಸಿದ್ದ. ಇದರಿಂದ ಮನನೊಂದಿದ್ದ ಮಹಾದೇವಿ ನಂತರ ಹಾಸನ ಮಹಿಳಾ ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದರು. ಬಳಿಕ ಡೆತ್‌ನೋಟ್ ಬರೆದಿಟ್ಟು ಮಗುವಿನೊಂದಿಗೆ ವೀಡಿಯೋ ಮಾಡಿದ್ದರು ಪತಿಯ ನಿಂದನೆ ಸಹಿಸಲು ಆಗುತ್ತಿಲ್ಲ. ನಾನು ಬದುಕಿರುವುದರಿಂದ ಅವನಿಗೆ ತೊಂದರೆ. ನನ್ನ ಸಾವಿಗೆ ನನ್ನ ಗಂಡ, ನನ್ನ ಅತ್ತೆ ಕಾರಣ. ಯಾವುದು ಬೇಡ, ಹೋರಾಟ ಮಾಡಲು, ಓಡಾಡಲು ಆಗುತ್ತಿಲ್ಲ. ನಾನು ಇದ್ದರೆ ತಮ್ಮ, ಅಪ್ಪ-ಅಮ್ಮನಿಗೂ ತೊಂದರೆ. ಬಾಯಿಗೆ ಬಂದಂತೆ ಬಯ್ಯುತ್ತಾನೆ. ಮೂರು ವರ್ಷದಿಂದ ನರಕ ಕೊಟ್ಟಿದ್ದಾನೆ. ಪೊಲೀಸರು ಹೇಳುವಷ್ಟು ಹೇಳಿದ್ದಾರೆ. ನನ್ನ ತಮ್ಮ, ಅಪ್ಪ, ಅಮ್ಮ ಎಲ್ಲರಿಗೂ ಜೀವ ಬೆದರಿಕೆ ಹಾಕಿದ್ದಾನೆ. ನನ್ನಿಂದ ಅವರ ಜೀವನ ಏಕೆ ಹಾಳಾಗಬೇಕು? ಮಗು ನನಗೆ ಹುಟ್ಟಿಲ್ಲ ಅಂತಾನೆ. ಇದನ್ನೆಲ್ಲಾ ಕೇಳಿಕೊಂಡು ಬದುಕಲು ಆಗಲ್ಲ,

ಈ ಜೀವನವೇ ಬೇಡ ನನಗೆ ಎಂದು ಆತ್ಮಹತ್ಯೆಗೂ ಮುನ್ನ ಮಹಾದೇವಿ ವೀಡಿಯೋ ಮಾಡಿಟ್ಟು ನಾಪತ್ತೆಯಾಗಿದ್ದರು ಬಳಿಕ ಕುಟುಂಬಸ್ಥರು ಮಹಾದೇವಿಗಾಗಿ ಎಲ್ಲೆಡೆ ಹುಡುಕಾಟ ನಡೆಸಿದ್ದರು. ಸೋಮವಾರ ಅರಕಲಗೂಡು ತಾಲೂಕಿನ, ಬೆಟ್ಟಸೋಗೆ ಬಳಿ ಮಹಾದೇವಿ ಮೃತದೇಹ ಪತ್ತೆಯಾಗಿದೆ. ಶುಕ್ರವಾರ ರಾಮನಾಥಪುರದ ಬಳಿಯ ಕಾವೇರಿ ನದಿಗೆ ಒಂದೂವರೆ ವರ್ಷದ ಮಗುವಿನೊಂದಿಗೆ ಹಾರಿ ಮಹಾದೇವಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಸದ್ಯ ಮಗುವಿನ ಮೃತದೇಹ ಇನ್ನೂ ಪತ್ತೆಯಾಗಿಲ್ಲ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕೊಣನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಅವಾಚ್ಯ ಶಬ್ದ ಬಳಸಿ ಪತಿಯಿಂದ ಟಾರ್ಚರ್; ಮಗುವಿನೊಂದಿಗೆ ವೀಡಿಯೋ ಮಾಡಿಟ್ಟು ಮಹಿಳೆ ಸೂಸೈಡ್



**ಹಾಸನ:** ಪತಿ ಮತ್ತು ಅತ್ತೆ ನೀಡಿದ ಕಿರುಕುಳಕ್ಕೆ ಬೇಸತ್ತ ಮಹಿಳೆಯೊಬ್ಬರು ತನ್ನ ಮಗುವಿನೊಂದಿಗೆ ಆತ್ಮಹತ್ಯೆ ಮಾಡಿಕೊಂಡ ಘಟನೆ ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನ ಬೆಟ್ಟಸೋಗೆ ಗ್ರಾಮದಲ್ಲಿ ನಡೆದಿದೆ. ಮದುವೆಯಾದಾಗಿನಿಂದಲೂ ಕಿರುಕುಳ ಕೊಡುತ್ತಿದ್ದ ಗಂಡನ ನಡತೆಯಿಂದ ಬೇಸತ್ತ ಮಹಿಳೆ ಡೆತ್ ನೋಟ್ ಬರೆದಿಟ್ಟು, ಮಗು ಜೊತೆ ವಿಡಿಯೋ ಮಾಡಿ ನದಿಗೆ ಹಾರಿದ್ದಾರೆ. ಪೊಲೀಸರ ನಿರ್ಲಕ್ಷ್ಯವೇ ಆಕೆಯ ಸಾವಿಗೆ ಕಾರಣವೆಂದು ಕುಟುಂಬಸ್ಥರು ಆರೋಪಿಸುತ್ತಿದ್ದಾರೆ.

ಮಗಳೊಂದಿಗೆ ವೀಡಿಯೋ ಮಾಡಿ ಮಹಿಳೆ ಆತ್ಮಹತ್ಯೆ

ಸಾಲಿಗ್ರಾಮ ಮೂಲದ ಮಹಾದೇವಿ (29) ಸುಮಾರು ಮೂರು ವರ್ಷಗಳ ಹಿಂದೆ ಸೀಬಳ್ಳಿ ಗ್ರಾಮದ ಕುಮಾರ್ ಜೊತೆ ವಿವಾಹವಾಗಿದ್ದರು. ಮದುವೆಯ ನಂತರದಿಂದಲೇ ಪತಿ ಅನುಮಾನಪಟ್ಟು ಅವಾಚ್ಯ ಶಬ್ದಗಳಿಂದ ನಿಂದನೆ ಹಾಗೂ ಮಾನಸಿಕ ಕಿರುಕುಳ ನೀಡುತ್ತಿದ್ದಾನೆಂದು ಆರೋಪಿಸಲಾಗಿದೆ. ಪತಿಯ ಕಿರುಕುಳ ತಾಳಲಾರದೆ 15 ದಿನಗಳ ಹಿಂದೆ ತವರು ಮನೆ ಸೇರಿದ್ದ ಅವರಿಗೆ ಫೋನ್ ಮತ್ತು ಮೆಸೇಜ್ ಮೂಲಕ ಕುಮಾರ್ ಅಶ್ಲೀಲ ಸಂದೇಶಗಳನ್ನು ಕಳುಹಿಸಿ ಕಿರುಕುಳ ನೀಡುತ್ತಲೇ ಇದ್ದ ಎಂದು ತಿಳಿದುಬಂದಿದೆ. ನವೆಂಬರ್ 14 ರಂದು ಪತಿ ವಿರುದ್ಧ ದೂರು ನೀಡುವುದಾಗಿ ಹೇಳಿ ಮನೆಯಿಂದ ಹೊರಟಿದ್ದ ಮಹಾದೇವಿ, ಇದೀಗ ತನ್ನ ಪತಿ ಮತ್ತು ಅತ್ತೆಯೇ ತನ್ನ ಸಾವಿಗೆ ಕಾರಣವೆಂದು ಹೇಳಿ ಸೆಲ್ಫಿ ವೀಡಿಯೋ ಮಾಡಿ, ಡೆತ್‌ನೋಟ್ ಬರೆದು, ಮಗಳೊಂದಿಗೆ ಕಾವೇರಿ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹಾದೇವಿ ಕುಟುಂಬಕ್ಕೂ ಜೀವ ಬೆದರಿಕೆ ಹಾಕಿದ್ದ ಪತಿ

ಮಹಾದೇವಿ ತಾನು ಮಾಡಿದ ವೀಡಿಯೋದಲ್ಲಿ ನನ್ನ ಪತಿ ಮತ್ತು ಅತ್ತೆಯೇ ನನ್ನ ಸಾವಿಗೆ ಕಾರಣ, ನನ್ನ ಕುಟುಂಬದವರಿಗೆ ಆತ ಜೀವ ಬೆದರಿಕೆ ಹಾಕಿದ್ದಾನೆ. ಹೀಗಿರುವಾಗ ನಾನು ಏಕೆ ಬದುಕಿರಬೇಕು ಎಂದು ತಮ್ಮ ನೋವು ಹೇಳಿಕೊಂಡಿದ್ದಾರೆ. ಬೆಟ್ಟಸೋಗೆ ಬಳಿಯ ನದಿಯಲ್ಲಿ ಮಹಾದೇವಿಯ ಮೃತದೇಹ ಪತ್ತೆಯಾಗಿದ್ದು, ಮಗುವಿನ ಹುಡುಕಾಟ ಮುಂದುವರಿದಿದೆ. ಪತಿ ಮತ್ತು ಅತ್ತೆಯ ಕಿರುಕುಳ ತಾಳಲಾರದೆ ದೂರು ನೀಡಲು ಬಂದ ಮಹಾದೇವಿಯನ್ನು ಪೊಲೀಸರು ಹೆದರಿಸಿ ವಾಪಾಸ್ ಕಳುಹಿಸಿದ್ದರು ಎಂದು ಮಹಾದೇವಿ ತಮ್ಮ ಹೇಳಿದ್ದು, ಪೊಲೀಸರ ನಿರ್ಲಕ್ಷ್ಯವೆ ಅಕ್ಕನ ಸಾವಿಗೆ ಕಾರಣವಾಗಿದೆ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪ್ರಕರಣ ಕೊಣನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ರಾಜ್ಯದಲ್ಲಿ ಕೈಗೆಟುಕುವ ದರದಲ್ಲಿ AI ಟೆಕ್ನಾಲಜಿಯೊಂದಿಗೆ ಕಂಪ್ಯೂಟರ್ KEO ಲಾಂಚ್

**ಬೆಂಗಳೂರು**: ಕರ್ನಾಟಕ ಸರ್ಕಾರವು ಡಿಜಿಟಲ್ ವಿಭಜನೆಯನ್ನು ಕಡಿಮೆ ಮಾಡುವ ಗುರಿಯೊಂದಿಗೆ ಕೈಗೆಟುಕುವ ದರದಲ್ಲಿ AI ಸಾಧ್ಯತೆಗಳೊಂದಿಗೆ ಕೂಡಿದ ಕಂಪ್ಯೂಟರ್ 'KEO' ಅನ್ನು ಬಿಡುಗಡೆ ಮಾಡುತ್ತಿದೆ. ಇದು ರಾಜ್ಯದಲ್ಲಿ ಮೊದಲ ಬಾರಿಗೆ ಸ್ಥಳೀಯವಾಗಿ ವಿನ್ಯಾಸಗೊಳಿಸಲ್ಪಟ್ಟ ,

ಅಭಿವೃದ್ಧಿಗೊಳಿಸಲ್ಪಟ್ಟ ಮತ್ತು ಸಂಗ್ರಹಿಸಲ್ಪಟ್ಟ ಡಿವೈಸ್. ನಾಳೆ (ನವೆಂಬರ್ 18, 2025) ಬೆಂಗಳೂರು ಟೆಕ್ ಸಮ್ಮಿಟ್ 2025ರ ಉದ್ಘಾಟನಾ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದನ್ನು ಔಪಚಾರಿಕವಾಗಿ ಬಿಡುಗಡೆ ಮಾಡಲಿದ್ದಾರೆ ಎಂದು ಐಟಿ, ಬಿಟಿ ಹಾಗೂ ಗ್ರಾಮೀಣ ಅಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಇಂದು ಬೆಂಗಳೂರಿನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಭಾರತದಲ್ಲಿ ಕೇವಲ 10%ಕ್ಕಿಂತ ಕಡಿಮೆ ಮನೆಗಳಲ್ಲಿ ಕಂಪ್ಯೂಟರ್ ಲಭ್ಯವಿದೆ. ಕರ್ನಾಟಕದಲ್ಲಿ ಇದು 15% ಆಗಿದ್ದರೂ, 60%ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆನ್‌ಲೈನ್ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಭಾರತದ ಡಿಜಿಟಲ್ ಆರ್ಥಿಕತೆ ವೇಗವಾಗಿ ಬೆಳೆಯುತ್ತಿರುವಾಗ, ಎಲ್ಲರಿಗೂ ಸಮಾನ ಡಿಜಿಟಲ್ ಅವಕಾಶಗಳು ಒದಗಿಸುವುದು ಅತ್ಯಗತ್ಯ. ಈ ಹಿನ್ನೆಲೆಯಲ್ಲಿ KEO ಕಂಪ್ಯೂಟರ್ ಅನ್ನು ಬಿಡುಗಡೆ ಮಾಡುತ್ತಿದ್ದೇವೆ. ಇದು ವಿದ್ಯಾರ್ಥಿಗಳು, ಸಣ್ಣ ವ್ಯವಹಾರಗಳು ಮತ್ತು ಮನೆಗಳಿಗೆ ಸಮಗ್ರ ಕಂಪ್ಯೂಟಿಂಗ್ ಸೌಲಭ್ಯವನ್ನು ಕೈಗೆಟುಕುವ ಬೆಲೆಯಲ್ಲಿ ಒದಗಿಸುತ್ತದೆ ಎಂದು ಸಚಿವರು ಹೇಳಿದರು. ನಾಳೆಯ ಸಮ್ಮಿಟ್‌ನಲ್ಲಿ KEOಯ ಬೆಲೆಯನ್ನು ಬಹಿರಂಗಪಡಿಸ ಲಾ ಗು ತ್ತ ದೆ . ಬಿಡುಗಡೆಯ ನಂತರ Keonext.in ವೆಬ್‌ಸೈಟ್‌ನಲ್ಲಿ ಬುಕಿಂಗ್ ಆರಂಭವಾಗುತ್ತದೆ. ಬುಕಿಂಗ್ ಮಾಡಿದ ಎರಡು ತಿಂಗಳ ಒಳಗೆ ವಿತರಣೆ




ನಡೆಸುತ್ತೇವೆ ಎಂದು ಖರ್ಗೆ ಭರವಸೆ ನೀಡಿದರು.

ಬೆಂಗಳೂರು ಟೆಕ್ ಸಮ್ಮಿಟ್ 2025 (BTS 2025)ಯ 28ನೇ ಆವೃತ್ತಿಯು 'ಫ್ಯೂಚರೈಸ್' ಥೀಮ್‌ನೊಂದಿಗೆ ನವೆಂಬರ್ 18ರಿಂದ 20ರವರೆಗೆ ಬೆಂಗಳೂರು ಅಂತರರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರ (BIEC)ಯಲ್ಲಿ ನಡೆಯಲಿದೆ. ಇದು ಏಷ್ಯಾದ ಅತಿದೊಡ್ಡ ತಂತ್ರಜ್ಞಾನ ಮತ್ತು ನವೋದ್ಭಾವ ಸಮ್ಮಿಟ್. 15,000ಕ್ಕೂ ಹೆಚ್ಚು ಪ್ರತಿನಿಧಿಗಳು, 550ಕ್ಕೂ ಹೆಚ್ಚು ಸ್ಪೀಕರ್‌ಗಳು, 1,000ಕ್ಕೂ ಹೆಚ್ಚು ಪ್ರದರ್ಶಕರು ಮತ್ತು 60ಕ್ಕೂ ಹೆಚ್ಚು ದೇಶಗಳಿಂದ ಭಾಗವಹಿಸುತ್ತಾರೆ. AI, ಕ್ವಾಂಟಮ್ ಕಂಪ್ಯೂಟಿಂಗ್, ಡೀಪ್‌ಟೆಕ್, ಸ್ಟಾರ್ಟ್‌ಅಪ್‌ಗಳು ಮತ್ತು ಸುಸ್ಥಿರತೆಯಂತಹ ವಿಷಯಗಳು ಚರ್ಚೆಗೆ ಒಳಗಾಗುತ್ತವೆ. ಫ್ಯೂಚರ್ ಮೇಕರ್ಸ್ ಕಾನ್‌ಕ್ಲೇವ್ ಮತ್ತು ಇನ್ವೆಸ್ಟರ್ ಕನೆಕ್ಟ್ ಪ್ರೋಗ್ರಾಂನಂತಹ ವಿಶೇಷ ಕಾರ್ಯಕ್ರಮಗಳು 20,000ಕ್ಕೂ ಹೆಚ್ಚು ಸ್ಟಾರ್ಟ್‌ಅಪ್ ಸ್ಥಾಪಕರನ್ನು ಆಕರ್ಷಿಸುತ್ತವೆ. ಕರ್ನಾಟಕ ಸರ್ಕಾರವು INR 600 ಕೋಟಿ ಯೋಜನೆಯನ್ನು ಘೋಷಿಸಿದ್ದು, AI, ML, ರೊಬೋಟಿಕ್ಸ್ ಮತ್ತು ಸುಸ್ಥಿರ ತಂತ್ರಜ್ಞಾನಗಳಿಗೆ ಒತ್ತು ನೀಡುತ್ತದೆ.

KEO ಕಂಪ್ಯೂಟರ್‌ಯು ಕರ್ನಾಟಕ ಎಲೆಕ್ಟ್ರಾನಿಕ್ಸ್, ಐಟಿ ಮತ್ತು ಬಿಟಿ ಇಲಾಖೆಯೊಂದಿಗೆ KEONICS (ಕರ್ನಾಟಕ ಸ್ಟೇಟ್ ಎಲೆಕ್ಟ್ರಾನಿಕ್ಸ್ ಡೆವಲಪ್‌ಮೆಂಟ್ ಕಾರ್ಪೊರೇಷನ್ ಲಿಮಿಟೆಡ್) ಸಹಯೋಗದಿಂದ ಅಭಿವೃದ್ಧಿಪಡಿಸಲ್ಪಟ್ಟಿದೆ. ಇದು ಓಪನ್-ಸೋರ್ಸ್ RISC-V ಪ್ರಾಸೆಸರ್ ಮೇಲೆ ನಿರ್ಮಿತವಾಗಿದ್ದು , ಲಿನಕ್ಸ್ ಆಧಾರಿತ ಆಪರೇಟಿಂಗ್ ಸಿಸ್ಟಮ್ (OS) ಹೊಂದಿದೆ. ಇದು ಸಂಪೂರ್ಣ ಓಪನ್-ಸೋರ್ಸ್ ಆರ್ಕ್‌ಐಎಸ್‌ಸಿ-ವಿ ಆಧಾರಿತವಾಗಿದ್ದು , ಸ್ಥಳೀಯ ಸ್ಟಾರ್ಟ್‌ಅಪ್‌ಗಳು ಮತ್ತು ಕನ್ನಡಿಗರಿಂದ ವಿನ್ಯಾಸಗೊಳಿಸಲ್ಪಟ್ಟಿದೆ. KEOಯು ಕಾಲೇಜುಗಳು, ಶಾಲೆಗಳು, ಸಣ್ಣ ವ್ಯವಹಾರಗಳು, ಸರ್ಕಾರಿ ಕಚೇರಿಗಳು ಮತ್ತು ಮನೆಗಳಲ್ಲಿ ಬಳಸಲು ಸೂಕ್ತವಾಗಿದೆ. ಇದು ಕರ್ನಾಟಕದ ಡಿಸೆಂಟ್ರಲೈಸ್ಡ್ ಟೆಕ್ ಬೆಳವಣಿಗೆಗೆ ಮೂಲಾಧಾರವಾಗಲಿದೆ.

KEOಯ ಮುಖ್ಯ ವೈಶಿಷ್ಟ್ಯಗಳು: 4G, ವೈ-ಫೈ, ಈಥರ್ನೆಟ್, USB-A ಮತ್ತು USB-C ಪೋರ್ಟ್‌ಗಳು, HDMI ಮತ್ತು ಆಡಿಯೊ ಜ್ಯಾಕ್ ಸೌಲಭ್ಯಗಳು. ಇದು ಕಲಿಕೆ, ಪ್ರೋಗ್ರಾಮಿಂಗ್ ಮತ್ತು ಉತ್ಪಾದಕತೆಗೆ ಸಂಪೂರ್ಣ ಸಜ್ಜು. ವಿಶೇಷವಾಗಿ, ಆನ್-ಡಿವೈಸ್ AI ಕೋರ್ ಇದ್ದು, ಇಂಟರ್ನೆಟ್ ಇಲ್ಲದಿದ್ದರೂ ಸ್ಥಳೀಯವಾಗಿ AI ಅನ್ವಯಗಳನ್ನು ನಡೆಸುತ್ತದೆ. ಕಡಿಮೆ ಸಂಪರ್ಕ ಹೊಂದಿರುವ ಪ್ರದೇಶಗಳಲ್ಲಿ ವಿದ್ಯಾರ್ಥಿಗಳಿಗೆ ಸಹಾಯಕವಾಗಲು, ಕರ್ನಾಟಕ DSERT ಸಿಲಬಸ್‌ನ ಮೇಲೆ ತರಬೇತಿ ಪಡೆದ AI ಏಜೆಂಟ್ 'BUDDH' (ಬುದ್ಧ) ಪೂರ್ವ-ಲೋಡ್ ಆಗಿರುತ್ತದೆ. ಇದು ಶಿಕ್ಷಣ, ಡಿಜಿಟಲ್ ಕೌಶಲ್ಯಗಳು ಮತ್ತು ಉದ್ಯೋಗ ಅವಕಾಶಗಳನ್ನು ಹೆಚ್ಚಿಸುತ್ತದೆ.

KEONICS ಅಧ್ಯಕ್ಷ ಶರತ್ ಕುಮಾರ್ ಬಚೆ ಗೌಡ ಮಾತನಾಡಿ, KEO ಎಂದರೆ ಸಮೀಪ, ಸ್ಥಳೀಯವಾಗಿ ಅಳವಡಿಸಿಕೊಳ್ಳಬಹುದಾದ ಮತ್ತು ಸ್ವದೇಶಿ ಕಂಪ್ಯೂಟಿಂಗ್‌ನಲ್ಲಿ ದೊಡ್ಡ ಹೆಜ್ಜೆ ಎಂದು ಹೇಳಿದ್ದಾರೆ. ಇದು ರಾಜ್ಯದ ಎಲ್ಲ ಜಿಲ್ಲೆಗಳಲ್ಲೂ ಡಿಜಿಟಲ್ ಕೌಶಲ್ಯಗಳು ಮತ್ತು ಉದ್ಯೋಗಗಳನ್ನು ತರಲಿದೆ. BTS 2025ರಲ್ಲಿ KEOಯನ್ನು ನೇರವಾಗಿ ಅನುಭವಿಸಬಹುದು. ಇದು ಕರ್ನಾಟಕವನ್ನು ಡೀಪ್‌ಟೆಕ್ ಕ್ಯಾಪಿಟಲ್ ಆಗಿ ಬಲಪಡಿಸುತ್ತದೆ.

ಒಟ್ಟಾರೆಯಾಗಿ, KEO ಭಾರತದಲ್ಲಿ ಮೊದಲ ಸ್ಥಳೀಯ AI-ರೆಡಿ PC ಆಗಿ ಐತಿಹಾಸಿಕ ಮೈಲುಗಲ್ಲು. ಇದು ಡಿಜಿಟಲ್ ಸಮಾನತೆಯನ್ನು ಖಚಿತಪಡಿಸಿ, ಭವಿಷ್ಯದ ತಂತ್ರಜ್ಞಾನ ಬೆಳವಣಿಗೆಗೆ ಮಾರ್ಗ ಸುಗಮಗೊಳಿಸುತ್ತದೆ. ಕರ್ನಾಟಕದ ತಂತ್ರಜ್ಞಾನ ಪ್ರೇಮಿಗಳು ಈ ನವೋದ್ಭಾವಕ್ಕೆ ಸ್ವಾಗತಿಸುತ್ತಿದ್ದಾರೆ.

# ಮಂತ್ರಿ ಸ್ಥಾನಕ್ಕೆ 'ಟವಲ್' ಹಾಕಿದ ಕಾಂಗ್ರೆಸ್ ಶಾಸಕರು ಸಿದ್ದರಾಮಯ್ಯ ಮನೆಗೆ ಶಾಸಕರ ದೌಡು



**ಬೆಂಗಳೂರು**: ಕರ್ನಾಟಕ ಕಾಂಗ್ರೆಸ್ ಸರ್ಕಾರದಲ್ಲಿ ಕ್ಯಾಬಿನೆಟ್ ಪುನಾರಚನೆಯ ಸುದ್ದಿ ಬಿಸಿಯಾಗಿರುವ ಸಂದರ್ಭದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಸಚಿವ ಸ್ಥಾನಕ್ಕೆ ಬೇಡಿಕೆ ಶಾಸಕರು ಶಾಲು ಸಾಲು ಭೇಟಿ ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ ದೆಹಲಿ ಭೇಟಿಗೆ ಮುನ್ನ ಕಾವೇರಿ ನಿವಾಸದಲ್ಲಿ ನಡೆದ ಈ ಭೇಟಿಗಳು, ಮುಂಬರುವ ಕ್ಯಾಬಿನೆಟ್ ವ್ಯಾಪಕತೆಯ ಕುರಿತು ರಾಜ್ಯದ ರಾಜಕೀಯ ವಲಯಗಳಲ್ಲಿ ಚರ್ಚೆಗೆ ಎಡೆ ಮಾಡಿಕೊಡಿದೆ.

ಮುಖ್ಯಮಂತ್ರಿಯೊಂದಿಗೆ ನೇರವಾಗಿ ಮಾತನಾಡಿ ತಮ್ಮ ಆಕಾಂಕ್ಷೆಯನ್ನು ವ್ಯಕ್ತಪಡಿಸಿದ ಶಾಸಕರ ಪಟ್ಟಿಯಲ್ಲಿ ನರೇಂದ್ರಸ್ವಾಮಿ, ಬಿ.ಆರ್.ಪಾಟೀಲ್, ವಿಜಯಾನಂದ ಕಾಶಪ್ಪನವರ್, ಅಶೋಕ್ ಪಟ್ಟಣ, ಪೊನ್ನಣ್ಣ ಮುಂತಾದವರು ಸೇರಿದ್ದಾರೆ. ಇದರಲ್ಲಿ ಶಾಸಕ ವಿಜಯಾನಂದ ಕಾಶಪ್ಪನವರ್ ಅವರ ಭೇಟಿ ಮತ್ತು ನಂತರದ ಮಾತುಗಳು ಅತ್ಯಂತ ಗಮನ ಸೆಳೆದಿದೆ. ಮುಖ್ಯಮಂತ್ರಿಯನ್ನು ಭೇಟಿ ಮಾಡಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕಾಶಪ್ಪನವರ್, ತಾವು ಮಂತ್ರಿ ಸ್ಥಾನದ 'ಪ್ರಬಲ ಆಕಾಂಕ್ಷಿ' ಎಂದು ಸ್ಪಷ್ಟವಾಗಿ ಘೋಷಿಸಿದರು. ನಾನು ಮಂತ್ರಿ ಸ್ಥಾನದ ಪ್ರಬಲ ಆಕಾಂಕ್ಷಿ. ಅದಕ್ಕಾಗಿಯೇ ಸಿಎಂ ಅವರನ್ನು ಭೇಟಿ ಮಾಡಿದ್ದೇನೆ. ಸಿಎಂ 'ನೋಡೋಣ, ಕಾಲ ಬಂದಾಗ ಮಾಡೋಣ' ಎಂದಿದ್ದಾರೆ, ಎಂದು ಕಾಶಪ್ಪನವರ್ ತಿಳಿಸಿದರು. ಮಂತ್ರಿ ಸ್ಥಾನ ಸಿಗುವುದರ ಬಗ್ಗೆ ತಮಗೆ ಪೂರ್ಣ ವಿಶ್ವಾಸ ಇದೆ ಎಂದು ಹೇಳಿದ ಅವರು, ತಮ್ಮ ಕುಟುಂಬವು ಕಾಂಗ್ರೆಸ್ ಪಕ್ಷದಲ್ಲಿ 'ಭದ್ರ ಬುನಾದಿ' ಹೊಂದಿದೆ ಎಂದು ಸೂಚಿಸಿದರು. ತಮ್ಮ ದಾವೆಯನ್ನು ಬಲಪಡಿಸಿಕೊಳ್ಳಲು ದೆಹಲಿ ಹೈಕಮಾಂಡ್‌ನಲ್ಲಿ ಯಾರೆಲ್ಲಾ ಸಂಪರ್ಕ ಹೊಂದಿದ್ದರು ಎಂಬ ಲಿಸ್ಟ್ ಇಲ್ಲಿದೆ ನೋಡಿ. ಸಿಎಂ ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ , ಕೆ.ಸಿ.ವೆಂಕಟರಮಣಯ್ಯ , ಸಚಿನ್ ಪೈಲಟ್ ಮತ್ತು ಸುರ್ಜೇವಾಲಾ ಅವರಿಗೆ ಮನವಿ ಮಾಡಿದ್ದೇನೆ. ರಾಹುಲ್ ಗಾಂಧಿ ಅವರಿಗೂ ಮನವಿ ಮಾಡಿದ್ದೇನೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿ ಸಭೆಗೆ ಮುನ್ನ ನಡೆದ ಈ ಭೇಟಿಗಳು, ಕ್ಯಾಬಿನೆಟ್ ಪುನಾರಚನೆಯ ಪ್ರಕ್ರಿಯೆ ಈಗಾಗಲೇ ಸಕ್ರಿಯವಾಗಿದೆ ಎಂಬ ಸಂಕೇತವನ್ನು ನೀಡುತ್ತವೆ. ಪ್ರಸ್ತುತ ಮಂತ್ರಿಮಂಡಲದಲ್ಲಿ ಖಾಲಿ ಇರುವ ಸ್ಥಾನಗಳು ಮತ್ತು ವಿವಿಧ ಪ್ರದೇಶಗಳು ಮತ್ತು ಸಮುದಾಯಗಳ ಪ್ರಾತಿನಿಧ್ಯವನ್ನು ಪುನರಾವಲೋಕನೆ ಮಾಡುವ ಅಗತ್ಯವಿದೆ. ಶಾಸಕರು ತಮ್ಮ ದಾವೆಯನ್ನು ನೇರವಾಗಿ ಮುಖ್ಯಮಂತ್ರಿಯ ಮುಂದೆ ಮಂಡಿಸುವುದು, ಈ ಪ್ರಕ್ರಿಯೆಯ ಒಂದು ನಿರ್ಣಾಯಕ ಹಂತವಾಗಿದೆ. ವಿಜಯಾನಂದ ಕಾಶಪ್ಪನವರ್ ಅವರಂತಹ ಶಾಸಕರು ತಮ್ಮ ಆಕಾಂಕ್ಷೆಯನ್ನು ಸಾರ್ವಜನಿಕವಾಗಿ ವ್ಯಕ್ತಪಡಿಸಿದ್ದು , ಪಕ್ಷದ ಒಳಗೆ ಇರುವ ಉತ್ಸುಕತೆ ಮತ್ತು ಸ್ಪರ್ಧೆಯನ್ನು ಸೂಚಿಸುತ್ತದೆ. ಪ್ರತಿ ಶಾಸಕರೂ ತಮ್ಮ ನಿರ್ವಾಚಕ ಕ್ಷೇತ್ರ, ಪಕ್ಷದೊಳಗಿನ ತಮ್ಮ ಸೇವೆ ಮತ್ತು ರಾಜ್ಯದ ಬೆಳವಣಿಗೆಯಲ್ಲಿ ತಮ್ಮದೇ ಆದ ಕೊಡುಗೆಯನ್ನು ಹೇಳಿಕೊಂಡೇ ಮುಖ್ಯಮಂತ್ರಿಯನ್ನು ಒತ್ತಾಯಿಸುತ್ತಿರುವುದು ಸಹಜ.

ಇದು ದೆಹಲಿಯಲ್ಲಿ ನಡೆಯಲಿರುವ ಉನ್ನತ-ಮಟ್ಟದ ಸಮಾಲೋಚನೆಗಳಿಗೆ ಮುನ್ನ ರಾಜ್ಯದ ನೇತೃತ್ವವು ಎಲ್ಲಾ ಅಂಶಗಳನ್ನು ಪರಿಶೀಲಿಸುತ್ತಿದೆ ಎಂಬುದನ್ನು ಸೂಚಿಸುತ್ತವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರುಗಳು ಪಕ್ಷದ ಕೇಂದ್ರ ನೇತೃತ್ವದೊಂದಿಗೆ ಸಮನ್ವಯಿಸಿಕೊಂಡು, ರಾಜ್ಯದ ರಾಜಕೀಯ ಸಮತೋಲನ ಮತ್ತು ಆಡಳಿತದ ದಕ್ಷತೆ ಎರಡನ್ನೂ ಪರಿಗಣಿಸಿ ಅಂತಿಮ ನಿರ್ಧಾರ ತೆಗೆದುಕೊಳ್ಳಬೇಕಾಗಿದೆ.

# ಮೋಸ್ಟ್ ವಾಂಟೆಡ್ ನಕ್ಸಲ್ ಕಮಾಂಡರ್ ಮದ್ವಿ ಹಿಡ್ಮಾ ಎನ್‌ಕೌಂಟರ್



**ವಿಶಾಖಪಟ್ಟಣ:** ಆಂಧ್ರ ಪ್ರದೇಶದ ಅಲ್ಲೂರಿ ಸೀತಾರಾಮ ರಾಜು ಜಿಲ್ಲೆಯ ಮಾರೆಡುಮಿಲ್ಲಿಯ ಅರಣ್ಯ ಪ್ರದೇಶದಲ್ಲಿಂದು ಬೆಳಗ್ಗೆ ಪೊಲೀಸರು ಮತ್ತು ನಕ್ಸಲರ ನಡುವಿನ ಗುಂಡಿನ ಚಕಮಕಿಯಲ್ಲಿ ಮಾವೋವಾದಿ ಸಂಘಟನೆಯ ಪ್ರಮುಖ ನಾಯಕ ಮದ್ವಿ ಹಿಡ್ಮಾ ಸೇರಿ 6 ಮಂದಿ ಹತ್ಯೆಗೀಡಾಗಿದ್ದಾರೆ. ಗುಂಡಿನ ಚಕಮಕಿಯಲ್ಲಿ ಯಾವುದೇ ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿಲ್ಲ. ಹತ್ಯೆಯಾದ ನಕ್ಸಲರ ಗುರುತು ಮತ್ತು ಗಾಯಗೊಂಡವರ ವಿವರಗಳನ್ನ ಕಲೆಹಾಕಲಾಗುತ್ತಿದೆ. ಘಟನಾ ಸ್ಥಳದಲ್ಲಿ ಕಾರ್ಯಾಚರಣೆ ಮುಂದುವರಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅಮಿತ್ ಬರ್ದಾರ್ ತಿಳಿಸಿದ್ದಾರೆ. ಕಳೆದ ಆರು ತಿಂಗಳಲ್ಲಿ ಅಲ್ಲೂರಿ ಸೀತಾರಾಮ ರಾಜು ಜಿಲ್ಲೆಯಲ್ಲಿ ನಡೆದ 2ನೇ ಪ್ರಮುಖ ಎನ್‌ಕೌಂಟರ್ ಇದಾಗಿದೆ. ಇದೇ ವರ್ಷ ಮೇ 7ರಂದು ವೈ. ರಾಮಾವರಂ ಮಂಡಲ ಅರಣ್ಯ ಪ್ರದೇಶದಲ್ಲಿ (Forest Area) ಪೊಲೀಸರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಇಬ್ಬರು ಮಾವೋವಾದಿಗಳು ಮೃತಪಟ್ಟಿದ್ದರು. ಮದ್ವಿ ಮೋಸ್ಟ್ ವಾಂಟೆಡ್ ನಕ್ಸಲ

ಸುಕ್ಮಾ ಪ್ರದೇಶದಲ್ಲಿ ಎನ್‌ಕೌಂಟರ್‌ಗೆ ಬಲಿಯಾದ ನಕ್ಸಲ) ಮದ್ವಿ ಹಿಡ್ಮಾ ಭಾರತದ ಮೋಸ್ಟ್ ವಾಂಟೆಡ್ ನಕ್ಸಲರಲ್ಲಿ ಒಬ್ಬನಾಗಿದ್ದ. ಸಿಪಿಐ (ಮಾವೋವಾದಿ) ಸಂಘಟನೆಯ ಉನ್ನತ ಕಮಾಂಡರ್ ಆಗಿದ್ದ. ಈತನ ತಲೆಗೆ 25 ರಿಂದ 50 ಲಕ್ಷ ರೂ. ವರೆಗೆ ಬಹುಮಾನ ಘೋಷಿಸಲಾಗಿತ್ತು. ಕಳೆದ ಕೆಲ ವರ್ಷಗಳಲ್ಲಿ ಛತ್ತಿಸ್‌ಘಡದ ಬಸ್ತಾರ್, ಸುಕ್ಮಾ , ದಾಂತೇವಾಡ ಹಾಗೂ ಮಲ್ಕನ್‌ಗಿರಿ ಪ್ರದೇಶಗಳಲ್ಲಿ ಪೊಲೀಸ್ ಮತ್ತು ಅರೆಸೇನಾಪಡೆಗಳ ಮೇಲೆ ನಡೆದ ಘೋರ ದಾಳಿಗಳ ಹಿಂದಿನ ಮಾಸ್ಟರ್ ಮೈಂಡ್ ಆಗಿದ್ದ ಎಂದು ಭದ್ರತಾಪಡೆಯ ಮೂಲಗಳು ತಿಳಿಸಿವೆ. ಮಾವೋವಾದಿಗಳ ಕಾರ್ಯಾಚರಣೆಗೆ ದೊಡ್ಡ ಹೊಡೆತ

ಉನ್ನತ ಕಮಾಂಡರ್ ಆಗಿದ್ದ ಹಿಡ್ಮಾ ಛತ್ತಿಸ್‌ಗಢ, ಜಾರ್ಖಂಡ್, ಒಡಿಶಾ ಹಾಗೂ ಮಹಾರಾಷ್ಟ್ರದ ಕೆಲ ಭಾಗಗಳಲ್ಲಿ ಮಾವೋವಾದಿ ಚಳವಳಿಗಳನ್ನ ಬಲವಾಗಿ ಸಂಘಟಿಸಿದ್ದ. ಜೊತೆಗೆ ಸಂಘಟನೆಗೆ ನೇಮಕಾತಿ ಈತನ ಮುಂದಾಳತ್ವದಲ್ಲೇ ನಡೆಯುತ್ತಿತ್ತು. ದರ್ಭಾ, ಸುಕ್ಮಾ, ಕೊಂಟೈಗಳಲ್ಲಿ ಈತ ನಕ್ಸಲ್ ಕಾರ್ಯಾಚರಣೆಗಳನ್ನ ನಡೆಸುತ್ತಿದ್ದ. ಸದ್ಯ ಈತನ ಎನ್‌ಕೌಂಟರ್ ಛತ್ತಿಸ್‌ಘಡ ವ್ಯಾಪ್ತಿಯ ನಕ್ಸಲ್ ಚಟುವಟಿಕೆಗಳಿಗೆ ಬಹುದೊಡ್ಡ ಹೊಡೆತ ನೀಡಿದಂತಾಗಿದೆ ಎಂದು ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

# ಡಿಜಿಟಲ್ ಅರೆಸ್ಟ್ – ಬೆಂಗ್ಳೂರಿನ ಮಹಿಳಾ ಟೆಕ್ಕಿಗೆ 31 ಕೋಟಿ ವಂಚಿಸಿದ ಸೈಬರ್ ವಂಚಕರು

**ಬೆಂಗಳೂರು**: ಇಂದಿರಾ ನಗರದ ಐಟಿ ಉದ್ಯೋಗಿಯೊಬ್ಬರಿಗೆ ಸೈಬರ್ ವಂಚಕರು ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಬೆದರಿಸಿ 31 ಕೋಟಿ ರೂ. ವಂಚಿಸಿದ್ದಾರೆ. ನಗರದ ಉಮಾರಾಣಿ ವಂಚನೆಗೊಳಗಾದ ಮಹಿಳಾ ಟೆಕ್ಕಿ 2024ರ ಸೆಪ್ಟೆಂಬರ್ 15ರಂದು ಕರೆ ಮಾಡಿದ್ದ ಅನಾಮಿಕ ವ್ಯಕ್ತಿ,

ತಾನು ಡಿಎಚ್‌ಎಲ್ ಕೊರಿಯರ್ ಸರ್ವಿಸ್‌ನಿಂದ ಕರೆ ಮಾಡಿದ್ದಾಗಿ ಪರಿಚಯ ಮಾಡಿಕೊಂಡಿದ್ದ. ಮುಂಬೈನ ಅಂಧೇರಿಯ ಡಿಎಚ್‌ಎಲ್ ಕೇಂದ್ರದಿಂದ ನಿಮ್ಮ ಹೆಸರಿಗೆ ಪಾರ್ಸೆಲ್ ಬಂದಿದೆ. ಅದರಲ್ಲಿ ಮೂರು ಕ್ರೆಡಿಟ್ ಕಾರ್ಡ್, ನಾಲ್ಕು ಪಾಸ್‌ಪೋರ್ಟ್ ಮತ್ತು ಎಂಡಿಎಂಎ ಡ್ರಗ್ಸ್ ಇದೆ ಎಂದಿದ್ದ. ಬೆಂಗಳೂರಿನಲ್ಲಿ ವಾಸ ಮಾಡುತ್ತಿರುವ ಕಾರಣ ತನಗೂ ಪಾರ್ಸೆಲ್‌ಗೂ ಸಂಬಂಧವಿಲ್ಲ ಎಂದು ಸಂತ್ರಸ್ತೆ ಹೇಳಿದ್ದಾರೆ.

ಪಾರ್ಸೆಲ್ ಮೇಲೆ ನಿಮ್ಮ ಮೊಬೈಲ್ ಸಂಖ್ಯೆ ಇರುವ ಕಾರಣ ಇದು ಸೈಬರ್ ಅಪರಾಧವಾಗಿದ್ದು , ಸೈಬರ್ ಸೆಲ್‌ಗೆ ವರದಿ ಮಾಡಿಕೊಳ್ಳುವಂತೆ ಸಲಹೆ ನೀಡಿದ್ದ. ಇದಾದ ಬಳಿಕ ವಿಡಿಯೋ ಕರೆ ಮಾಡಿದ ಇನ್ನೋರ್ವ ವ್ಯಕ್ತಿ, ಸಿಬಿಐ ಅಧಿಕಾರಿ ಎಂದು ಪರಿಚಯಿಸಿಕೊಂಡಿದ್ದ. ವಿಚಾರವನ್ನು ತಮ್ಮ ಕುಟುಂಬದವರಿಗೆ ತಿಳಿಸಿದರೆ, ಅವರ ಹೆಸರನ್ನು ಪ್ರಕರಣದಲ್ಲಿ ಸೇರಿಸುವುದಾಗಿ ಬೆದರಿಸಿದ್ದ.

2024ರ ಸೆಪ್ಟೆಂಬರ್ 23ರಂದು ವಿಡಿಯೊ ಕರೆ ಮಾಡಿದ ವ್ಯಕ್ತಿ ಸಿಬಿಐ ಅಧಿಕಾರಿ ಎಂದು ಪರಿಚಯಿಸಿಕೊಂಡು ಒಂದು ವಾರ ಸಂತ್ರಸ್ತೆಯ ವಿಚಾರಣೆ ನಡೆಸಿದ್ದ. ಆರ್‌ಬಿಐನ ಫೈನಾನ್ಸಿಯಲ್ ಇಂಟೆಲಿಜೆನ್ಸ್ ಯೂನಿಟ್‌ಗೆ (ಎಫ್‌ಐಯು) ತಮ್ಮ ಆಸ್ತಿಯ ವಿವರಗಳನ್ನು ಘೋಷಿಸಬೇಕು. ತನಿಖೆಯ ಭಾಗವಾಗಿ ನಿಮ್ಮ ಬ್ಯಾಂಕ್ ಖಾತೆ ಪರಿಶೀಲಿಸಬೇಕಿರುವ ಕಾರಣ, ಹಣ ವರ್ಗಾವಣೆ ಮಾಡಬೇಕು. ಪರಿಶೀಲನೆ ಬಳಿಕ ಹಣವನ್ನು ವಾಪಸ್ ನೀಡಲಾಗುವುದು ಎಂದು ಹೇಳಿದ್ದ. ಆತನ ಮಾತು ನಂಬಿ, ಸಂತ್ರಸ್ತೆ ತಮ್ಮ ನಿಶ್ಚಿತ ಠೇವಣಿ ಮತ್ತು ಉಳಿತಾಯ ಖಾತೆಯಲ್ಲಿದ್ದ ಹಣವನ್ನು 187 ಬಾರಿ ವಂಚಕರು ನೀಡಿದ್ದ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿದ್ದರು.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

# ಏರ್‌ಪೋರ್ಟ್‌ನಲ್ಲಿ 14 ಕೋಟಿ ರೂ. ಮೌಲ್ಯದ ಮಾದಕ ವಸ್ತು ಜಪ್ತಿ 8 ಬಗೆಯ ಅಪರೂಪದ ಪ್ರಾಣಿಗಳೂ ವಶಕ್ಕೆ





**ದೇವನಹಳ್ಳಿ**: ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ಬಳಿಯ ಕೆಂಪೇಗೌಡ ಏರ್‌ಪೋರ್ಟ್‌ನಲ್ಲಿ (Kempegowda Airport) ಬರೋಬ್ಬರಿ 14 ಕೋಟಿ ರೂ ಮೌಲ್ಯದ ಮಾದಕ ವಸ್ತು ಜಪ್ತು ಮಾಡಲಾಗಿದೆ. ಕಸ್ಟಮ್ಸ್ ಅಧಿಕಾರಿಗಳು ಕಳೆದ 18 ದಿನಗಳಿಂದ ಪ್ರತ್ಯೇಕ ಪ್ರಕರಣಗಳಲ್ಲಿ ಗಾಂಜಾ ಸಾಗಿಸುತ್ತಿದ್ದ 10 ಮಂದಿ ಪ್ರಯಾಣಿಕರನ್ನು ವಶಕ್ಕೆ ಪಡೆದಿದ್ದು , ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಗಾಂಜಾ ಸಾಗಿಸುತ್ತಿದ್ದ 10 ಮಂದಿ ಪ್ರಯಾಣಿಕರು ಅಂದರ್**

ದೇವನಹಳ್ಳಿ ಸಮೀಪದ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ಕಳೆದ 18 ದಿನಗಳಲ್ಲಿ ನಡೆಸಿದ ತಪಾಸಣೆಯಲ್ಲಿ ಸುಮಾರು 14.22 ಕೋಟಿ ರೂ. ಮೌಲ್ಯದ ಹೈಡ್ರೋಪೋನಿಕ್ಸ್ ಗಾಂಜಾ, ಇ-ಸಿಗರೇಟ್ ವಶಪಡಿಸಿಕೊಂಡಿದಾರೆ. ಪ್ರತ್ಯೇಕ ಪ್ರಕರಣಗಳಲ್ಲಿ ವಿದೇಶಗಳಿಂದ ಅಕ್ರಮವಾಗಿ ಮಾದಕ ವಸ್ತುಗಳನ್ನು ಸಾಗಿಸುತ್ತಿದ್ದ 10 ಮಂದಿ ಪ್ರಯಾಣಿಕರನ್ನು ವಶಕ್ಕೆ ಪಡೆಯಲಾಗಿದೆ. ಅಧಿಕಾರಿಗಳ ಮಾಹಿತಿಯಂತೆ, ಬ್ಯಾಂಕಾಕ್ ಸೇರಿದಂತೆ ವಿದೇಶದ ಹಲವು ನಗರಗಳಿಂದ ಬಂದ ಪ್ರಯಾಣಿಕರು ತಮ್ಮ ಬ್ಯಾಗ್‌ಗಳಲ್ಲಿ 38.64 ಕೆ.ಜಿ ಹೈಡ್ರೋಪೋನಿಕ್ಸ್ ಗಾಂಜಾ, 2.38 ಲಕ್ಷ ರೂ. ಮೌಲ್ಯದ ವಿದೇಶಿ ಇ-ಸಿಗರೇಟ್‌ಗಳು ಹಾಗೂ ಎಂಟು ಬಗೆಯ ಅಪರೂಪದ ಜೀವಂತ ಪ್ರಾ ಣಿ ಗ ಳ ನ್ನು ಸಾ ಗಿ ಸು ತ್ತಿ ದ್ದ ರೆಂ ದು ಗೊತ್ತಾಗಿದೆ. ಏರ್ಪೋರ್ಟ್ನ ಪ್ರಯಾಣಿಕರ ಚೆಕಿಂಗ್ ಸಂ ದ ರ್ಭ ದ ಲ್ಲಿ ಸಂ ಶ ಯಾ ಸ್ಪ ದ ಬ್ಯಾಗ್‌ಗಳನ್ನು ಸ್ಕ್ಯಾನಿಂಗ್ ಮಾಡಿದಾಗ ಈ ಅಕ್ರಮ ವಸ್ತುಗಳು ಪತ್ತೆಯಾಗಿದೆ ಎಂದು ತಿಳಿದು ಬಂದಿದೆ. ಕಸ್ಟಮ್ಸ್ ಅಧಿಕಾರಿಗಳು ಕಸ್ಟಮ್ಸ್ ಆಕ್ಟ್ ಮತ್ತು ಸಂಬಂಧಿತ ಕಾನೂನುಗಳಡಿ ಪ್ರಕರಣ ದಾಖಲಿಸಿ, ಮಾದಕ ವಸ್ತುಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಸಿಸಿಬಿ ದಾಳಿಯಲ್ಲಿ 7.70 ಕೋಟಿ ರೂ. ಮೌಲ್ಯದ ಮಾದಕ ವಸ್ತು ಜಪ್ತಿ ಬೆಂಗಳೂರು ನಗರದಲ್ಲಿ ಸಿಸಿಬಿ ಮತ್ತು ಸ್ಥಳೀಯ ಪೊಲೀಸ್ ಠಾಣೆಗಳ ಸಂಯುಕ್ತ ಕಾರ್ಯಾಚರಣೆಯಲ್ಲಿ 7. 70 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದು , 14 ವಿದೇಶಿ ಪ್ರಜೆಗಳನ್ನು ಒಳಗೊಂಡಂತೆ 19 ಆರೋಪಿಗಳನ್ನು ಬಂಧಿಸಲಾಗಿದೆ. ಸುದ್ದುಗುಂಟೆಪಾಳ್ಯ, ಮಹದೇವಪುರ, ವರ್ತೂರು ಮತ್ತು ಕೆ.ಜಿ.ನಗರ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ದಾಳಿಗಳಲ್ಲಿ ಒಟ್ಟು 4.904 ಕೆ.ಜಿ. ಡ್ರಗ್ಸ್ ಜಪ್ತಿ ಮಾಡಲಾಗಿದೆ.

ಸಿಸಿಬಿ ಪೊಲೀಸರು 1.52 ಕೋಟಿ ರೂ. ಮೌಲ್ಯದ 760 ಗ್ರಾಂ MDMA ಹಾಗೂ 4.08 ಲಕ್ಷ ರೂ.ಮೌಲ್ಯದ 2.44 ಕೆ.ಜಿ MDMA ವಶಪಡಿಸಿಕೊಂಡರೆ, ಕೆ.ಜಿ.ನಗರ ಪೊಲೀಸರು 1.5 ಕೆ.ಜಿ ಹೈಡ್ರೋ ಗಾಂಜಾ, ಮಹದೇವಪುರ ಪೊಲೀಸರು 600 ಗ್ರಾಂ ಹೈಡ್ರೋ ಗಾಂಜಾ ಸೀಜ್ ಮಾಡಿದ್ದಾರೆ. ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಅವರು ಶೀಘ್ರದಲ್ಲೇ ಈ ಕುರಿತು ಸುದ್ದಿಗೋಷ್ಠಿ ನಡೆಸಲಿದ್ದಾರೆ.

# SLC ಫಲಿತಾಂಶ ಸುಧಾರಣೆಗೆ ಅಧಿಕಾರಿಗಳ ಕಸರತ್ತು



**ರಾಯಚೂರು**: ಶೈಕ್ಷಣಿಕವಾಗಿ ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಸ್‌ಎಸ್‌ಎಲ್‌ಸಿ (SSLC) ಫಲಿತಾಂಶ ಹೆಚ್ಚಿಸಲು ಸರ್ಕಾರ ನಾನಾ ಕಸರತ್ತು ನಡೆಸಿದೆ.

ರಾಯಚೂರಿನಲ್ಲಿ ಸ್ವತಃ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿಯೇ ಶಿಕ್ಷಕರು, ಅಧಿಕಾರಿಗಳಿಗೆ ಕಾರ್ಯಗಾರ ಮಾಡಿದ್ದಾರೆ. ಆದರೆ ಶಿಕ್ಷಕರ ಖಾಲಿ ಹುದ್ದೆಗಳನ್ನು ತುಂಬದೇ ಫಲಿತಾಂಶ ಸುಧಾರಣೆ ಹೇಗೆ ಅಂತ ಶಿಕ್ಷಣ ಪ್ರೇಮಿಗಳು ಪ್ರಶ್ನಿಸುತ್ತಿದ್ದಾರೆ ರಾಯಚೂರು ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ನೂರಾರು ಶೂನ್ಯ ಶಿಕ್ಷಕರ ಶಾಲೆಗಳಿವೆ. ಸುಮಾರು 25 ಸಾವಿರ ಶಿಕ್ಷಕರ ಹುದ್ದೆಗಳು ಖಾಲಿಯಿವೆ. ವಿಷಯವಾರು ಶಿಕ್ಷಕರಿಲ್ಲದೆ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮರೀಚಿಕೆಯಾಗಿದೆ. ಆದರೂ ಶಿಕ್ಷಣ ಇಲಾಖೆ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಿಸಲು ನಾನಾ ಕಾರ್ಯಕ್ರಮಗಳನ್ನ ಆಯೋಜಿಸುತ್ತಲೇ ಇದೆ. ಈ ವರ್ಷ ಜೂನ್‌ನಿಂದ 29 ಅಂಶಗಳಲ್ಲಿ ಕೆಲಸ ಮಾಡಲಾಗುತ್ತಿದ್ದು , ಆತ್ಮವಿಶ್ವಾಸದಿಂದ ವಿದ್ಯಾರ್ಥಿಗಳು ಪರೀಕ್ಷೆಗೆ ತಯಾರಾಗಿ ಪರೀಕ್ಷೆ ಬರೆಯಲು ಅನುಸರಿಸಬೇಕಾದ ವಿಧಾನಗಳ ಬಗ್ಗೆ ಸುತ್ತೋಲೆ ಹೊರಡಿಸಿ ಶಾಲೆಗಳಲ್ಲಿ ಪಾಠ ಮಾಡಲು ಸೂಚಿಸಲಾಗಿದೆ. ಶಿಕ್ಷಕರು, ಅಧಿಕಾರಿಗಳಿಗೆ ತರಬೇತಿ ಮೇಲೆ ತರಬೇತಿ ನೀಡುತ್ತಿದೆ. ಪಾಸಿಂಗ್ ಅಂಕವನ್ನ ಕೂಡ ಸರ್ಕಾರ ಇಳಿಸಿದೆ.

ರಾ ಯ ಚೂ ರು , ವಿಜಯನಗರ, ಬಳ್ಳಾರಿ, ಕೊಪ್ಪಳ ಜಿಲ್ಲೆ ಫಲಿತಾಂಶ ಹೆಚ್ಚಿಸಲು ರಾಯಚೂರಿನಲ್ಲಿ ಶಿಕ್ಷಕರು, ಬಿಇಓಗಳು ಸೇರಿ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಹಾಗೂ ಮಾಸ್ಟರ್ ಟ್ರೇನರ್ಸ್‌ಗಳಿಗೆ ಕಲಬುರಗಿ ವಿಭಾಗ ಮಟ್ಟದ ಕಾರ್ಯಗಾರ ಮಾಡಲಾಗಿದೆ. ಸ್ವತಃ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್ ಕಾರ್ಯಾಗಾರದಲ್ಲಿ ಭಾಗವಹಿಸಿ, ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಆದರೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಫಲಿತಾಂಶಕ್ಕೆ ಶಿಕ್ಷಕರ ಕೊರತೆಗೆ ದೊಡ್ಡ ಸಮಸ್ಯೆಯಾಗಿದೆ.

ಸರ್ಕಾರ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಮಾಸ್ಟರ್ ಟ್ರೇನರ್ಸ್‌ಗೆ ತರಬೇತಿ ಕಾರ್ಯಗಾರ, ಮಕ್ಕಳಿಗೆ ಸ್ಪೆಷಲ್ ಕ್ಲಾಸ್ ಮಾಡುತ್ತಿರುವುದು ಸರಿ, ಆದರೆ ಪ್ರಾಥಮಿಕ ಶಾಲಾ ಶಿಕ್ಷಣ ಗಟ್ಟಿಗೊಳಿಸದೇ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆ ಹೇಗೆ ಸಾಧ್ಯ ಅನ್ನೋದು ಶಿಕ್ಷಣ ಪ್ರೇಮಿಗಳು, ಪೋಷಕರ ಪ್ರಶ್ನೆಯಾಗಿದೆ.

ಶಿಕ್ಷಕರಿಲ್ಲದಿದ್ದರೆ ಗುಣಮಟ್ಟದ ಶಿಕ್ಷಣ ಪಡೆಯಲು ಸಾಧ್ಯವಿಲ್ಲ. ನೇರವಾಗಿ ಎಸ್‌ಎಸ್‌ಎಲ್‌ಸಿ ಮಕ್ಕಳಿಗೆ ಸ್ಪೆಷಲ್ ಕ್ಲಾಸ್ ಮಾಡುವುದರಿಂದ ಪ್ರಯೋಜನವಿಲ್ಲ. ಖಾಲಿ ಹುದ್ದೆಗಳನ್ನ ಭರ್ತಿ ಮಾಡಿ. ಫಲಿತಾಂಶ ಕುಸಿತಕ್ಕೆ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ ಸಿಇಓ, ಡಿಡಿಪಿಐಗಳು ಮಾತ್ರ ಹೊಣೆಗಾರರಲ್ಲಾ ಸರ್ಕಾರವೇ ನೇರ ಹೊಣೆಗಾರ ಅಂತ ಅಸಮಾಧಾನ ಹೊರಹಾಕಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.